**<u>ಸಾಕ್ಷಿಗೆ ದಿನಾಂಕಃ 20.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ</u>**

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀಮತಿ ಎಲ್.ಕೆ. ರವರಿಂದಃ</u>**

1) ನಾನು ಈ ಪ್ರಕರಣದಲ್ಲಿ **5** ನೇ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, ಮತ್ತು ಪೋ**ಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು ಗುರುತಿಸಿದೆ.

3) ಕೃತ್ಯ ನಡೆದ ಸ್ಥಳದ ನಕ್ಷೆಯನ್ನು ನಿ.ಪಿ.**3** ಎಂದು, ಕೃತ್ಯ ನಡೆದ ಸ್ಥಳದ ಪಂಚನಾಮೆಯನ್ನು ನಿ.ಪಿ.**4** ಎಂದು, ಮತ್ತು ಐಎಂವಿ ವರದಿಯನ್ನು ನಿ.ಪಿ.**5** ಎಂದು ಗುರುತಿಸಿದೆ.

4) ಶವ ತನಿಖಾ ವರದಿಯನ್ನು ನಿ.ಪಿ.**6** ಎಂದು, ಶವ ಪರೀಕ್ಷಾ ವರದಿಯನ್ನು ನಿ.ಪಿ.**7** ಎಂದು ಮತ್ತು ಅಂತಿಮ ವರದಿಯನ್ನು ನಿ.ಪಿ.**8** ಎಂದು ಗುರುತಿಸಿದೆ.

**ಸೂಚನೆಃ** ನಿ.ಪಿ.1 ರಿಂದ ನಿ.ಪಿ.8 ಎಂದು ಗುರುತು ಆಗಿರುವ ದಾಖಲೆಗಳು ಜೀವನ್‌ಭೀಮಾನಗರ ಸಂಚಾರ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

5) ಅಪಘಾತದಲ್ಲಿ ಮರಣ ಹೊಂದಿದ ದಂಡಪಾಣಿ ಪಾತ್ರ ಅವರ ಮರಣ ಪ್ರಮಾಣ ಪತ್ರವನ್ನು ನಿ.ಪಿ.**9** ಎಂದು ಗುರುತಿಸಿದೆ.

6) ಅಪಘಾತದಲ್ಲಿ ಮರಣ ಹೊಂದಿದ ದಂಡಪಾಣಿ ಪಾತ್ರ ರವರ ಮತ್ತು ತಮ್ಮ ಮತ್ತು ಇತರೆ ಅರ್ಜಿದಾರರ ಮೂಲ ಆಧಾರ್ ಕಾರ್ಡ್ ಗಳನ್ನು ಮತ್ತು ಇದೇ ದಾಖಲೆಗಳ ನೆರಳಚ್ಚು ಪ್ರತಿ**(photo copies)** ಗಳನ್ನು ಈ ಸಾಕ್ಷಿದಾರರು ಹಾಜರುಪಡಿಸಿದ್ದಾರೆ. ಸದರಿ ಮೂಲ ದಾಖಲೆಗಳನ್ನು ಮತ್ತು ನೆರಳಚ್ಚು ಪ್ರತಿ**(photo copies)** ಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ನೆರಳಚ್ಚು ಪ್ರತಿ**(photo copies)** ಗಳನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ನೆರಳಚ್ಚು ಪ್ರತಿ**(photo copies)** ಗಳನ್ನು ನಿ.ಪಿ.**10** ರಿಂದ ನಿ.ಪಿ.**15** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

7) ಆದ ಕಾರಣದಿಂದ ಪ್ರಾರ್ಥನೆಯಂತೆ ನನಗೆ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.